# ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು -12

E-mail: commissioner.pue@gmail.com *Ph: No. 23361857, 23361858* Fax-23361852


ಸಂಖ್ಯೆಃ ಪಪೂಶಿ ಜಂನಿ (ಪರೀಕ್ಷೆ) ಮಾರ್ಚ್ 2017 ದಿನಾಂಕಃ 13-03-2017.

## ಸುತ್ತೋಲೆ

2017 ರ ಮಾರ್ಚ್ ದ್ವಿತೀಯ ಪಿ ಯು ಸಿ ಪರೀಕ್ಷೆಯ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್‌ಗಳನ್ನು ಹಾಗೂ ಇತರೆ ಎಲೆಕ್ಟ್ರಾನಿಕ್ ಉಪಕರಣಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು. ಈ ಕುರಿತು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕರುಗಳಿಗೆ, ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸುವ ಅಧಿಕಾರಿ/ಸಿಬ್ಬಂದಿಗಳಿಗೆ, ವಿದ್ಯಾರ್ಥಿಗಳಿಗೆ, ಪೋಷಕರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿದೆ.

ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು. ಸಹ ಮುಖ್ಯ ಅಧೀಕ್ಷಕರುಗಳು, ಕೊಠಡಿ ಮೇಲ್ವಿಚಾರಕರು ಹಾಗೂ ಪರೀಕ್ಷಾ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಪರೀಕ್ಷಾ ಕೊಠಡಿ ಪ್ರವೇಶಿಸುವ ಮುನ್ನ ಎಲ್ಲಾ ವಿದ್ಯಾರ್ಥಿಗಳನ್ನು ತಪಾಸಣೆ ಮಾಡಿ ಮೊಬೈಲ್ ಹಾಗೂ ಇತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಹೊಂದಿಲ್ಲದಿರುವುದನ್ನು ಖಚಿತಪಡಿಸಿಕೊಂಡು ಪರೀಕ್ಷಾ ಕೇಂದ್ರದ ಕೊಠಡಿಯೊಳಗೆ ಪ್ರವೇಶ ನೀಡಲು ಸೂಚಿಸಿದೆ. ಕೊಠಡಿ ಮೇಲ್ವಿಚಾರಕರು ಇದರ ಬಗ್ಗೆ ಪ್ರಮಾಣ ಪತ್ರವನ್ನು ಮುಖ್ಯ ಅಧೀಕ್ಷಕರಿಗೆ ನೀಡಲು ಸೂಚಿಸಿದೆ. ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗಿ ಪರೀಕ್ಷೆ ಮುಗಿಯುವ ಮುನ್ನವೇ ಪರೀಕ್ಷಾ ಕೇಂದ್ರವನ್ನು/ಕೊಠಡಿಯನ್ನು ಬಿಟ್ಟು ತೆರಳುವ ವಿದ್ಯಾರ್ಥಿಗಳಿಗೆ ಪ್ರಶ್ನೆ ಪತ್ರಿಕೆಗಳನ್ನು 1:30 ರ ನಂತರವೇ ಪರೀಕ್ಷಾ ಕೇಂದ್ರ/ಕೊಠಡಿಯಿಂದ ತೆಗೆದುಕೊಂಡು ಹೋಗಲು ಅನುಮತಿಸತಕ್ಕದ್ದು. ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಪರೀಕ್ಷಾ ಕಾರ್ಯದಲ್ಲಿ ಭಾಗಹಿಸುವ ಉಳಿದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಮೊಬೈಲ್ ಫೋನ್ ಬಳಕೆ ಮಾಡುವಂತಿಲ್ಲ ಹಾಗೂ ಪರೀಕ್ಷಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳನ್ನು ಹೊರತುಪಡಿಸಿ ಬೇರೆ ಯಾರಿಗೂ ಪರೀಕ್ಷಾ ಕೇಂದ್ರ ಪ್ರವೇಶಿಸುವುದನ್ನು ನಿರ್ಬಂಧಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಅವ್ಯವಹಾರ ನಡೆದಲ್ಲಿ ಅದಕ್ಕೆ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಮತ್ತು ಪರೀಕ್ಷಾ ಅಧಿಕಾರಿ/ಸಿಬ್ಬಂದಿಗಳು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ.

13/3/17

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಅಂತರ್ಜಾಲದಲ್ಲಿ ಅಳವಡಿಸಲು.
4. ಕಚೇರಿ ಪ್ರತಿ.